ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016–17 ದಿನಾಂಕ: 05–02–2017

# ಪತ್ರಿಕಾ ಪ್ರಕಟಣೆ

## ದಡಾರ ಮತ್ತು ರುಬೆಲ್ಲಾ (ಎಂಆರ್) ಲಸಿಕಾ ಅಭಿಯಾನಕ್ಕೆ ಚಾಲನೆ

ಬೆಂಗಳೂರು, ಫೆಬ್ರವರಿ 5, (ಕರ್ನಾಟಕ ವಾರ್ತೆ)

ದಡಾರ–ರುಬೆಲ್ಲಾ ಅಭಿಯಾನವನ್ನು ಕೇಂದ್ರ ರಾಸಾಯನಿಕ, ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಅನಂತ್‌ಕುಮಾರ್ ಅವರು ಇಂದು ಉದ್ಘಾಟಿಸಿದರು.

ಅವರು ಇಂದು ವಿಧಾನ ಸೌಧದ ಬ್ಯಾಂಕ್ವೆಟ್‌ಹಾಲ್‌ನಲ್ಲಿ ಏರ್ಪಡಿಸಿದ್ದ ದಡಾರ–ರುಬೆಲ್ಲಾ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಕೇಂದ್ರ ಸರ್ಕಾರ ಶೇ. 100 ರಷ್ಟು ಈ ಕಾರ್ಯಕ್ರಮದ ಯಶಸ್ಸಿಗೆ ಯೋಜನೆ ಹಾಕಿಕೊಂಡಿದೆ ಎಂದರು.

ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವ ಸದಾನಂದ ಗೌಡ ಅವರು ಮಾತನಾಡಿ ರಾಜ್ಯ ಸರ್ಕಾರಗಳು ಈ ಅಭಿಯಾನವನ್ನು ಅನುಷ್ಠಾನಗೊಳಿಸಲು ಅನೇಕ ಯೋಜನೆಗಳನ್ನು ರೂಪಿಸಿವೆ ಭಾರತ ಸರ್ಕಾರವೂ ಇದರಲ್ಲಿ ಭಾಗಿಯಾಗಿದೆ. ಈ ವರ್ಷ 47352 ಕೋಟಿ ರೂ.ಗಳನ್ನು ಕೇಂದ್ರ ಸರ್ಕಾರವು ಆರೋಗ್ಯ ಇಲಾಖೆ ಬಿಡುಗಡೆ ಮಾಡಿದೆ ಇದು ಹಿಂದಿನ ವರ್ಷಕ್ಕಿಂತ 1200 ಕೋಟಿ ರೂ.ಗಳ ಹೆಚ್ಚುವರಿ ಅನುದಾನವಾಗಿದೆ ಎಂದು ತಿಳಿಸಿದರು.

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ರಾಜ್ಯ ಸಚಿವ ಫಗ್ಗನ್ ಸಿಂಗ್ ಕುಲಾಸ್ತೆ ಅವರು ಮಾತನಾಡಿ ಎನ್.ಜಿ.ಒ ತರಹ ಸಂಘಸಂಸ್ಥೆಗಳು ಈ ಅಭಿಯಾನಕ್ಕೆ ಸಹಕಾರ ನೀಡಲು ಕೋರಿದರು.

ರಾಜ್ಯ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್ ಕುಮಾರ್ ಅವರು ಮಾತನಾಡಿ ಮಕ್ಕಳಿಗೆ, ಯುವಕರಿಗೆ ಪ್ರತಿಯೊಬ್ಬ ಜನಸಾಮಾನ್ಯರಿಗೂ ಉತ್ತಮ ಆರೋಗ್ಯ ನೀಡುವುದು ಸರ್ಕಾರದ ಕರ್ತವ್ಯ. ಪ್ರಸ್ತುತ ಜಾರಿಯಾಗುತ್ತಿರುವ ಅಭಿಯಾನ ಕಾರ್ಯಕ್ರಮವನ್ನು ಪ್ರತಿಯೊಬ್ಬರು ಗೌರವಿಸಬೇಕು ಎಂದರು.

ರಾಜ್ಯ ವೈದ್ಯಕೀಯ ಶಿಕ್ಷಣ ಸಚಿವ ಡಾ: ಶರಣ್‌ಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಮಾತನಾಡಿ ಅಭಿಯಾನ ರೂಪದಲ್ಲಿ ಇಂತಹ ಉತ್ತಮ ಕಾರ್ಯಕ್ರಮ ಹಮ್ಮಿಕೊಂಡಿರುವುದು ಬಡ ಮಕ್ಕಳಿಗೆ ಸಹಾಯಕಾರಿಯಾಗಿದೆ. ರಾಜ್ಯದ ಆರು ಕೋಟಿ ಜನರ ಆರೋಗ್ಯಕ್ಕಾಗಿ ಸರ್ಕಾರ ಅನೇಕ ಯೋಜನೆಗಳು ರೂಪಿಸಿದೆ. ಇದರ ಲಾಭವನ್ನು ಪ್ರತಿಯೊಬ್ಬರು ಪಡೆಯಬೇಕು. ಮುಖ್ಯಮಂತ್ರಿಗಳು ಎಲ್ಲಾ ಯೋಜನೆಗಳಿಗೂ ಉತ್ತಮ ಪ್ರೋತ್ಸಾಹ ನೀಡುತ್ತಿದ್ದಾರೆ. ಸಾಮಾನ್ಯ ಮತ್ತು ಬಡಜನರಿಗೆ ಈ ಯೋಜನೆಗಳು ತಲುಪಬೇಕು ಎಂಬುದು ಅವರ ಉದ್ದೇಶ ಎಂದರು.

ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಸುಭಾಷ್ ಚಂದ್ರ ಕುಂಟಿಯಾ ಅವರು ಮಾತನಾಡಿ ದೇಶದಲ್ಲೇ ರಾಜ್ಯ ಸರ್ಕಾರ ಮೊದಲ ಬಾರಿಗೆ ಮಾರಕ ರೋಗಗಳ ನಿರ್ಮೂಲನೆಗೆ ಪಣತೊಟ್ಟಿದೆ. ಮೊದಲ ಹಂತದಲ್ಲಿ ಶಾಲೆಗಳಲ್ಲಿ ಹಮ್ಮಿಕೊಳ್ಳಲಾಗಿದೆ. ಮುಂದಿನ ಹಂತದಲ್ಲಿ ಅಂಗನವಾಡಿ ಮೂಲಕ ಹಾಗೂ ನಂತರದಲ್ಲಿ ಮನೆಮನೆಗಳಿಗೆ ಭೇಟಿ ನೀಡಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಾ: ಶಾಲಿನಿ ರಜನೀಶ್ ಅವರು ಮಾತನಾಡಿ ಕಾರ್ಯಕ್ರಮಕ್ಕೆ ಭಾಗವಹಿಸಿದ್ದ ಎಲ್ಲರನ್ನು ಸ್ವಾಗತಿಸುತ್ತಾ 2020 ರ ವೇಳೆಗೆ ದಡಾರ ಮತ್ತು ರುಬೆಲ್ಲಾ ನಿರ್ಮೂಲನೆ ಹಾಗೂ ನಿಯಂತ್ರಕ್ಕೆ ಎಲ್ಲರ ಸಹಕಾರ ಕೋರಿದರು.

ಸಮಾರಂಭಕ್ಕೆ ವಿಶೇಷ ಆಹ್ವಾನಿತರಾಗಿದ್ದ ಖ್ಯಾತ ಚಲನಚಿತ್ರ ಕಲಾವಿದ ಶ್ರೀ ರಮೇಶ್ ಅರವಿಂದ್ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದ ಶಾಲಾ ಮಕ್ಕಳಿಗೆ ಮುಂಜಾಗ್ರತಾ ಕ್ರಮವಾಗಿ ಪ್ರತಿಯೊಬ್ಬರು ಲಸಿಕೆ ಹಾಕಿಸಿಕೊಳ್ಳಬೇಕೆಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಆಶಾ ಕಾರ್ಯಕರ್ತೆಯರು ಭಾಗವಹಿಸಿದ್ದರು.

ಇಂದಿರಾ/ಕೆಎಂ